# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 42
ಸದಸ್ಯರ ಹೆಸರು : ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 13.02.2024
ಉತ್ತರಿಸುವ ಸಚಿವರು : ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು.

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸಣ್ಣ ಕೈಗಾರಿಕೆ ವ್ಯಾಪ್ತಿಗೆ ಬರುವ ಉದ್ದಿಮೆಗಳಾವುವು: (ಮಾಹಿತಿ ಒದಗಿಸುವುದು) | ಭಾರತ ಸರ್ಕಾರವು ದಿನಾಂಕ: 01.07.2020 ರಿಂದ ಜಾರಿಗೆ ತಂದಿರುವ ಹೊಸ ವ್ಯಾಖ್ಯಾನದ ಪ್ರಕಾರ ಯಂತ್ರೋಪಕರಣ ಮತ್ತು ಸ್ಥಾವರಗಳಲ್ಲಿ ಒಟ್ಟು ಬಂಡವಾಳ ರೂ.10 ಕೋಟಿ ಮೀರದಂತೆ ಹೂಡಿಕೆ ಮಾಡಿರುವ ಮತ್ತು ವಾರ್ಷಿಕ ವಹಿವಾಟು ರೂ.50 ಕೋಟಿ ಮೀರದಂತೆ ಇರುವ ಉತ್ಪಾದನಾ ಮತ್ತು ಸೇವಾ ಚಟುವಟಿಕೆಯ ವಲಯದ ಉದ್ಯಮಗಳನ್ನು ಸಣ್ಣ ಕೈಗಾರಿಕೆ ಎನ್ನುತ್ತಾರೆ.<br><br>ಈ ವ್ಯಾಖ್ಯಾನದ ವ್ಯಾಪ್ತಿಯಲ್ಲಿ ರಾಜ್ಯದಲ್ಲಿ ಸ್ಥಾಪನೆಗೊಂಡ ಉತ್ಪಾದನಾ ಮತ್ತು ಸೇವಾ ಚಟುವಟಿಕೆಯ ಸಣ್ಣ ಕೈಗಾರಿಕೆಗಳನ್ನು ಈ ಕೆಳಗಿನಂತೆ ವಿಂಗಡಿಸಲಾಗಿದೆ:<br><br>1. ಕೃಷಿ ಮತ್ತು ಆಹಾರ ಸಂಸ್ಕರಣಾ ಕೈಗಾರಿಕೆಗಳು<br>2. ಜವಳಿ ಮತ್ತು ಸಿದ್ಧ ಉಡುಪು ಕೈಗಾರಿಕೆಗಳು<br>3. ಇಂಜಿನಿಯರಿಂಗ್ ಕೈಗಾರಿಕೆಗಳು<br>4. ಆಟೋಮೊಬೈಲ್ ಕೈಗಾರಿಕೆಗಳು<br>5. ರಾಸಾಯನಿಕ ಕೈಗಾರಿಕೆಗಳು<br>6. ಔಷಧ ಮತ್ತು ಜೈವಿಕ ತಂತ್ರಜ್ಞಾನ ಕೈಗಾರಿಕೆಗಳು<br>7. ಮಾಹಿತಿ ತಂತ್ರಜ್ಞಾನ ಕೈಗಾರಿಕೆಗಳು<br>8. ಪ್ಲಾಸ್ಟಿಕ್ ಆಧಾರಿಕ ಕೈಗಾರಿಕೆಗಳು<br>9. ಕರಕುಶಲ ಉತ್ಪನ್ನ ಕೈಗಾರಿಕೆಗಳು<br>10. ಸ್ಟೀಲ್ ಮತ್ತು ಐರನ್ ಕೈಗಾರಿಕೆಗಳು<br>11. ವಿದ್ಯುತ್ ಮತ್ತು ಎಲೆಕ್ಟ್ರಾನಿಕ್ ಕೈಗಾರಿಕೆಗಳು |
| ಆ) | ಸಣ್ಣ ಕೈಗಾರಿಕೆ ಇಲಾಖೆ ಅಧೀನಕ್ಕೆ ಬರುವ ಸಾರ್ವಜನಿಕ ನಿಗಮಗಳು / ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಸೊಸೈಟಿಗಳು ಹಾಗೂ ಇತರೆ ಅಂಗ ಸಂಸ್ಥೆಗಳು ಯಾವುವು; | ಎಂ.ಎಸ್.ಎಂ.ಇ. ನಿರ್ದೇಶನಾಲಯದ ಅಧೀನಕ್ಕೆ ಬರುವ ಸಾರ್ವಜನಿಕ ನಿಗಮಗಳು / ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಸೊಸೈಟಿಗಳು ಹಾಗೂ ಇತರೆ ಅಂಗಸಂಸ್ಥೆಗಳು ಈ ಕೆಳಗಿನಂತಿವೆ.<br><br>1. ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು<br>2. ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು<br>3. ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು<br>4. ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಬೆಂಗಳೂರು<br>5. ಕರ್ನಾಟಕ ರಾಜ್ಯ ತೆಂಗಿನ ನಾರಿನ ಮಹಾಮಂಡಳಿ, ಬೆಂಗಳೂರು<br>6. ಕರ್ನಾಟಕ ತಾಂತ್ರಿಕ ಉನ್ನತೀಕರಣ ಪರಿಷತ್, ಬೆಂಗಳೂರು<br>7. ಕರ್ನಾಟಕ ಚರ್ಮ ತಾಂತ್ರಿಕ ಸಂಸ್ಥೆ, ಬೆಂಗಳೂರು |

| | | |
|---|---|---|
| ಇ) | ಇವುಗಳಿಗೆ ಸರ್ಕಾರ ವಿಧಿಸಿರುವ ಮಾನದಂಡಗಳೇನು? (ಮಾಹಿತಿ ಒದಗಿಸುವುದು) | ರಾಜ್ಯದಲ್ಲಿ ಸಣ್ಣ ಉದ್ಯಮಗಳನ್ನು ತೆರೆಯಲು ಉದ್ಯಮಶೀಲರು ಕನಿಷ್ಠ ಈ ಕೆಳಗಿನ ಮಾರ್ಗಸೂಚಿಯನ್ನುಅನುಸರಿಸಬೇಕಾಗುತ್ತದೆ.<br><br>1. ಮಾಲೀಕತ್ವ ಉದ್ಯಮ ಸ್ಥಾಪಿಸಲು ಬಯಸುವ ಉದ್ಯಮಶೀಲರು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ/ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ನಿವೇಶನದಲ್ಲಿ ಕೈಗಾರಿಕೆಯನ್ನು ಸ್ಥಾಪಿಸುವ ಉದ್ದೇಶವನ್ನು ಹೊಂದಿದಲ್ಲಿ "ಕಾಮನ್ಅಪ್ಲಿಕೇಷನ್ ಫಾರಂ" ನ್ನು ಭರ್ತಿ ಮಾಡಿ ಅರ್ಜಿಯನ್ನು ಸಂಬಂಧಿಸಿದ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರಕ್ಕೆ ಸಲ್ಲಿಸಬೇಕಾಗುತ್ತದೆ.<br><br>2. ಜಿಲ್ಲಾ ಕೈಗಾರಿಕಾ ಕೇಂದ್ರವು ಈ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗುವ "ಜಿಲ್ಲಾ ಮಟ್ಟದ ಏಕ ಗವಾಕ್ಷಿ ಸಮಿತಿ" ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದು ತಾತ್ವಿಕ ಅನುಮೋದನಾ ಪತ್ರವನ್ನು ಉದ್ಯಮಶೀಲರಿಗೆ ನೀಡುತ್ತದೆ.<br><br>3. ನಂತರ ಉದ್ಯಮಶೀಲರು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗೆ ನಿವೇಶನಕ್ಕೆ ಅರ್ಜಿ ಸಲ್ಲಿಸಿ ನಿವೇಶನವನ್ನು ಪಡೆದುಕೊಳ್ಳಬೇಕಾಗುತ್ತದೆ. ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ನಿವೇಶನವಾದಲ್ಲಿ ಅದಕ್ಕೆ ಸಂಬಂಧಿಸಿದ ಸಮಿತಿಯು ನಿವೇಶನವನ್ನು ಹಂಚಿಕೆ ಮಾಡುತ್ತದೆ.<br><br>4. ಉದ್ಯಮಶೀಲರು ನಿವೇಶನದ ಹಂಚಿಕೆ ಆದ ನಂತರ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಾದ ಹಣಕಾಸಿನ ನೆರವಿಗಾಗಿ ಬ್ಯಾಂಕ್/ ಕೆ.ಎಸ್.ಎಫ್.ಸಿ.ಗೆ ಯೋಜನಾವರದಿ ಮತ್ತು ಇತರೆ ಅಗತ್ಯ ದಾಖಲೆಗಳನ್ನು ಸಲ್ಲಿಸಿ ಸಾಲ ಮಂಜೂರಾತಿಯನ್ನು ಪಡೆದುಕೊಳ್ಳಬೇಕಾಗುತ್ತದೆ.<br><br>5. ಕೈಗಾರಿಕಾ ಕಟ್ಟಡ ನಿರ್ಮಾಣಕ್ಕಾಗಿ ಕೆ.ಐ.ಎ.ಡಿ.ಬಿ/ ಕೆ.ಎಸ್.ಎಸ್.ಐ.ಡಿ.ಸಿ/ ಸ್ಥಳೀಯ ಪ್ರಾಧಿಕಾರದಿಂದ ನಕ್ಷೆ ಅನುಮೋದನೆ ಪಡೆದುಕೊಂಡು ಕಟ್ಟಡ ನಿರ್ಮಾಣ ಪ್ರಾರಂಭಿಸಬೇಕಾಗುತ್ತದೆ.<br><br>6. ಕೈಗಾರಿಕಾ ಚಟುವಟಿಕೆಯನ್ನು ಆಧರಿಸಿ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ "ಕನ್ಸೆಂಟ್ ಫಾರ್ ಎಸ್ಟಾಬ್ಲಿಷ್‌ಮೆಂಟ್" ಅನುಮತಿಯನ್ನು ಪಡೆಯಬೇಕಾಗುತ್ತದೆ.<br><br>7. ವಿದ್ಯುತ್ ಸಂಪರ್ಕಕ್ಕಾಗಿ ಸಂಬಂಧಿಸಿದ ಎಸ್ಕಾಂನಿಂದ ಮಂಜೂರಾತಿಯನ್ನು ಪಡೆಯಬೇಕಾಗುತ್ತದೆ.<br><br>8. ನೀರಿನ ಸಂಪರ್ಕಕ್ಕಾಗಿ ಸಂಬಂಧಿಸಿದ ಪ್ರಾಧಿಕಾರದಿಂದ ಅನುಮತಿಯನ್ನು ಪಡೆಯಬೇಕಾಗುತ್ತದೆ.<br><br>9. ಚಟುವಟಿಕೆ / ಯಂತ್ರೋಪಕರಣಗಳನ್ನು ಆಧರಿಸಿ "ಫ್ಯಾಕ್ಟರೀಸ್ ಮತ್ತು ಬಾಯ್ಲರ್" ಇಲಾಖೆಯಿಂದ ಅನುಮತಿ ಪಡೆಯಬೇಕಾಗುತ್ತದೆ.<br><br>10. ಕಾರ್ಮಿಕರ ಸಂಖ್ಯೆಯನ್ನು ಆಧರಿಸಿ ಕಾರ್ಮಿಕ ಇಲಾಖೆಯಿಂದ ಅನುಮೋದನೆ ಪಡೆದುಕೊಳ್ಳಬೇಕಾಗುತ್ತದೆ.<br><br>11. ಕಾರ್ಮಿಕರ ಸಂಖ್ಯೆ 20 ಕ್ಕೂ ಹೆಚ್ಚಾದಲ್ಲಿ ಇ.ಎಸ್.ಐ/ ಪಿ.ಎಫ್/ ವೃತ್ತಿತೆರಿಗೆ ನೋಂದಣಿ ಪಡೆಯಬೇಕಾಗುತ್ತದೆ. |

| | | |
|---|---|---|
| | | 12. ಉದ್ದೇಶಿತ ಕೈಗಾರಿಕೆಯ ವಾರ್ಷಿಕ ವಹಿವಾಟು ರೂ.40 ಲಕ್ಷಕ್ಕಿಂತ ಹೆಚ್ಚಾಗುವುದಿದ್ದಲ್ಲಿ ವಾಣಿಜ್ಯ ತೆರಿಗೆ ಇಲಾಖೆಯಿಂದ "ಜಿ.ಎಸ್.ಟಿ" ನೋಂದಣಿ ಪಡೆಯಬೇಕಾಗುತ್ತದೆ.<br><br>13. ಆಹಾರ ಸಂಸ್ಕರಣಾ ಕೈಗಾರಿಕಾ ಚಟುವಟಿಕೆಯಾದಲ್ಲಿ "ಎಫ್.ಎಸ್.ಎಸ್.ಎ.ಐ" ರಹದಾರಿಯನ್ನು ಪಡೆಯಬೇಕಾಗುತ್ತದೆ.<br><br>14. ಅಪಾಯಕಾರಿ ಕೈಗಾರಿಕಾ ಚಟುವಟಿಕೆಯಾದಲ್ಲಿ "ಫೈರ್ ಸೇಫ್ಟಿ ಪ್ರಮಾಣಪತ್ರ" ವನ್ನು ಅಗ್ನಿಶಾಮಕ ಇಲಾಖೆಯಿಂದ ಪಡೆದುಕೊಳ್ಳಬೇಕಾಗುತ್ತದೆ.<br><br>15. ಕಟ್ಟಡ ನಿರ್ಮಾಣ, ಯಂತ್ರೋಪಕರಣಗಳ ಸ್ಥಾಪನೆಯಾದ ನಂತರ ಕೈಗಾರಿಕಾ ಚಟುವಟಿಕೆಯನ್ನು ಆಧರಿಸಿ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ "ಕನ್ಸೆಂಟ್ ಫಾರ್‌ಆಪರೇಷನ್" ಅನುಮತಿಯನ್ನು ಪಡೆಯಬೇಕಾಗುತ್ತದೆ.<br><br>ಉದ್ಯಮಶೀಲರು ಕೆ.ಐ.ಎ.ಡಿ.ಬಿ/ ಕೆ.ಎಸ್.ಎಸ್.ಐ.ಡಿ.ಸಿ ನಿವೇಶನದ ಅವಶ್ಯಕತೆ ಇಲ್ಲದೆ ತಮ್ಮ ಸ್ವಂತ ನಿವೇಶನದಲ್ಲಿ ಕೈಗಾರಿಕೆ ಸ್ಥಾಪಿಸಲು ಬಯಸಿದಲ್ಲಿ/ ಬಾಡಿಗೆ ಕಟ್ಟಡದಲ್ಲಿ ಕೈಗಾರಿಕೆ ನಡೆಸಲು ಬಯಸಿದಲ್ಲಿ ಜಿಲ್ಲಾ ಮಟ್ಟದ ಏಕ ಗವಾಕ್ಷಿ ಸಮಿತಿಯ ಅನುಮೋದನೆ ಇಲ್ಲದೇ ಮೇಲಿನ ಕ್ರಮ ಸಂಖ್ಯೆ 5 ರಿಂದ 15 ರವರೆಗಿನ ಕ್ರಮ ಅನುಸರಿಸಬೇಕಿರುತ್ತದೆ. |

ಸಿಐ 42 ಸಿಎಸ್‌ಸಿ 2024

**(ಶರಣಬಸಪ್ಪ ದರ್ಶನಾಪೂರ)**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ
ಉದ್ದಿಮೆಗಳ ಸಚಿವರು